**CC 1313/2018**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ**
**ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**

**ಸಿಸಿ ನಂಬರ್** 1313/2018

**ಸಿ ಡಬ್ಲ್ಯೂ** -3
**ಪಿ ಡಬ್ಲ್ಯೂ** -2

**ಸಾಕ್ಷಿಯ ಹೆಸರು -** **ಕಮಾಲ್ ಬಾಷಾ**
**ತಂದೆಯ ಹೆಸರು -** **ಮೆಹಬೂಬ್ ಬಾಷಾ**
**ವಯಸ್ಸು -** 52 **ವರ್ಷಗಳು**
**ಉದ್ಯೋಗ -** **ಚಾಲಕ**
**ವಾಸಸ್ಥಳ -** **ಹೊಸಪೇಟೆ**

**ಸಾಕ್ಷಿಯನ್ನು ದಿನಾಂಕಃ** 20-11-2025 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ **2** ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿಃ **2(**ಬಿ**)** ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು **5-6** ವರ್ಷಗಳ ಹಿಂದೆ ನಮ್ಮ ಮನೆಯ ಹತ್ತಿರ ಮಾಡಿರುತ್ತೇನೆ. ನಿಪಿಃ **2** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಯಾವ ಕಾರಣಕ್ಕೆ ಪಂಚನಾಮೆ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಈಗ ನಾನು ನೋಡುತ್ತಿರುವ ಇನ್ನೊಂದು ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಮದುವೆಯಾದ ಸ್ಥಳದ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ **5** ಎಂದು, ಸಾಕ್ಷಿಯ ಸಹಿಯನ್ನು ನಿಪಿಃ **5(**ಬಿ**)** ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು 5-6 ವರ್ಷಗಳ ಹಿಂದೆ ಶಾದಿ ಮಹಲ್ ಹತ್ತಿರ ಮಾಡಿರುತ್ತೇನೆ. ನಿಪಿಃ 5 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಯಾವ ಕಾರಣಕ್ಕೆ ಪಂಚನಾಮೆ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಕಚ್ಚಾ ನಕಾಶೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕಚ್ಚಾ ನಕಾಶೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿಃ 18 ಎಂದು, ಸಾಕ್ಷಿಯ ಸಹಿಯನ್ನು ನಿಪಿಃ 18(ಎ) ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಪೋಲಿಸರ ಮುಂದೆ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**<u>ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ</u>**

ದಿಃ 14-09-2017 ರಂದು ಪೋಲಿಸರು ಪ್ರಕರಣದ ಪಿರ್ಯಾದುದಾರರು ಕೃತ್ಯ ಸ್ಥಳವನ್ನು ತೋರಿಸಿದಾಗ ನನ್ನ ಮತ್ತು ಚಾಸಾ -2 ರವರ ಸಮಕ್ಷಮ ನಿಪಿಃ 2 ರಂತೆ ಪಂಚನಾಮ ಕ್ರಮ ಜರುಗಿಸಿ ಸ್ಥಳದಲ್ಲಿ ನಮ್ಮ ಸಹಿಗಳನ್ನು ಪಡೆದಿದ್ದರು ಅಂದರೆ ಸರಿಯಲ್ಲ. ಅದೇ ದಿನ ಪಿರ್ಯಾದುದಾರರ ಮದುವೆಯಾವ ಶಾದಿ ಮಹಲ್ ಹತ್ತಿರ ಅವರು ಸ್ಥಳ ತೋರಿಸಿದಂತೆ ನಿಪಿಃ 5 ರ ಪಂಚನಾಮೆ ಕ್ರಮ ಜರುಗಿಸಿ ಸ್ಥಳದಳ್ಳಿ ನಮ್ಮ ಸಹಿ ಪಡೆದಿದ್ದರು ಅಂದರೆ ಸರಿಯಲ್ಲ. ಆಗಲೇ ನಿಪಿಃ 3,4 ಮತ್ತು 6 ರ ಪೋಟೊಗಳನ್ನು ತೆಗೆಯಲಾಗಿತ್ತು ಅಂದರೆ ಸರಿಯಲ್ಲ. ಕಚ್ಚಾ ನಕಾಶೆಯನ್ನು ಆಗಲೇ ತಯಾರಿಸಲಾಗಿತ್ತು ಅಂದರೆ ಸರಿಯಲ್ಲ.

ನಾನು ಚಾಸಾ -1 ಮತ್ತು ಆರೋಪಿಯ ಮದುವೆ ಮಾತುಕತೆ ಸಮಯದಲ್ಲಿ ಹಾಜರಿದ್ದೆ ಮತ್ತು ನಂತರ ಅವರಿಬ್ಬರ ಮದುವೆ ಹಿರಿಯರ ಸಮಕ್ಷಮ ಆಗಿತ್ತು ಅಂದರೆ ಸರಿಯಲ್ಲ. ನಾನು ಪ್ರಕರಣದ ಬಗ್ಗೆ ಮಾಹಿತಿಯನ್ನು ತಿಳಿದುಕೊಂಡು ದಿಃ 14-09-2017 ರಂದು ಪೋಲಿಸರ ಮುಂದೆ "ದಿಃ 26-12-2007 ರಂದು .................. ಪಂಚನಾಮೆಗಳಿಗೆ ಸಹಿ ಮಾಡಿರುತ್ತೇನೆ" ಎಂದು ಹೇಳಿಕೆ ನೀಡಿರುತ್ತೇನೆ ಅಂದರೆ ಸರಿಯಲ್ಲ. ಸಾಕ್ಷಿ ನೀಡಿಲ್ಲ ಎಂಬ ಹೇಳಿಕೆ ಎಂಬ ಭಾಗವನ್ನು ನಿಪಿಃ 19 ಎಂದು ಗುರುತಿಸಲಾಯಿತು.

ನನ್ನ ಸಮಕ್ಷ ಮ ಪಂಚನಾಮೆಗಳು ಆಗಿದ್ದರೂ ಸಹ ನಾನು ನಿಪಿಃ 19 ರಂತೆ ಹೇಳಿಕೆ ನೀಡಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಎಸ್.ವಿ.ಬಿ ವಕೀಲರಿಂದಃ**

ಇಲ್ಲಾ

ಮರುವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.